# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಾರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ: 18ನೇ ಡಿಸೆಂಬರ್, 2018**

**(ಸಮಯ: ಬೆಳಗ್ಗೆ: 11.30 ಗಂಟೆಗೆ)**

******

## 01. ಪ್ರಶ್ನೋತ್ತರ

| | | | |
|---|---|---|---|
| **ಅ.** | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | ಏಳನೆಯ ಪಟ್ಟಿ |
| **ಆ.** | **<u>ತಡೆಹಿಡಿಯಲಾದ ಪ್ರಶ್ನೆ:</u>**<br>2ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಎನ್. ರವಿಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 28(06) | : | ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |
| **ಇ.** | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | ಏಳನೆಯ ಪಟ್ಟಿ |

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:–**

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2018ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆಯ ಮೇಲಿನ ಕಾರ್ಯನಿರ್ವಹಣಾ ವರದಿಯನ್ನು (ಸಂಖ್ಯೆ–4) ಸಭೆಯ ಮುಂದಿಡುವುದು.

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2018ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಸರ್ಕಾರಿ ಭೂಮಿ ಮಂಜೂರಾತಿ, ಗುತ್ತಿಗೆ, ಒತ್ತುವರಿಗಳ ತೆರವುಗೊಳಿಸುವಿಕೆ ಹಾಗೂ ಅಕ್ರಮ ಹಿಡುವಳಿಗಳನ್ನು ಸಕ್ರಮಗೊಳಿಸುವಿಕೆಗಳ ಬಗ್ಗೆ ವರದಿಯನ್ನು (ಸಂಖ್ಯೆ–5) ಸಭೆಯ ಮುಂದಿಡುವುದು.

ಇ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.

..2

## ೦೩. ವರದಿಯನ್ನೊಪ್ಪಿಸುವುದು

**ಶ್ರೀ ಆರ್. ಧರ್ಮಸೇನ** (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು 2018–19ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ **ಮೊದಲನೇ ವರದಿಯನ್ನು** ಒಪ್ಪಿಸುವುದು.

## ೦೪. ಗಮನ ಸೆಳೆಯುವ ಸೂಚನೆಗಳು

**ಅ) ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಹಾಗೂ ಮಾನ್ಯ ಸದಸ್ಯರುಗಳಾದ: ಶ್ರೀ ಬಿ.ಜಿ. ಪಾಟೀಲ್, ಶ್ರೀ ಎಂ.ಕೆ. ಪ್ರಾಣೇಶ್ ಹಾಗೂ ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ** ಅವರುಗಳು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಸಿಬ್ಬಂದಿಗಳನ್ನು ನೇಮಿಸದಿರುವುದು ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವ ಕುರಿತು **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ಚಿನ್ನ–ಬೆಳ್ಳಿ ಕೆಲಸಗಾರರ ಮೇಲೆ ವಿನಾ: ಕಾರಣ ದೂರು ದಾಖಲು ಮಾಡುತ್ತಿರುವುದು, ಕಳ್ಳತನ ಪ್ರಕರಣಗಳ ತನಿಖೆ ನೆಪದಲ್ಲಿ ಚಿನ್ನ–ಬೆಳ್ಳಿ ಕೆಲಸಗಾರರ ಮೇಲೆ ದೌರ್ಜನ್ಯ ನಡೆಸುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಇ) ಶ್ರೀ ಎಂ.ಸಿ.ವೇಣುಗೋಪಾಲ್** ಅವರು ಬೆಂಗಳೂರು ನಗರದಲ್ಲಿ ಸಾರ್ವಜನಿಕ ಉಪಯೋಗಕ್ಕಾಗಿ ಸಿಎ ನಿವೇಶನಗಳನ್ನು ಗುತ್ತಿಗೆ ಪಡೆದ ಸಂಸ್ಥೆಗಳು ನಿವೇಶನ ಪಡೆಯುವ ಸಂದರ್ಭದಲ್ಲಿ ತಿಳಿಸಿದ ಉದ್ದೇಶಕ್ಕಾಗಿ ಉಪಯೋಗಿಸದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## ೦೫. ನಿಯಮ ೩೩೦ರ ಮೇರೆಗೆ

**ಅ) ಶ್ರೀಯುತರುಗಳಾದ: ಐವನ್ ಡಿ'ಸೋಜಾ, ಬಿ.ಎಂ. ಫಾರೂಖ್ ಹಾಗೂ ಕೆ. ಹರೀಶ್ ಕುಮಾರ್** ಅವರುಗಳು ಕರಾವಳಿ ಜಿಲ್ಲೆಗಳಲ್ಲಿ ಮರಳು ಸಮಸ್ಯೆ ತೀವ್ರಗೊಂಡಿದ್ದು, ಈ ಸಂಬಂಧ ಸರ್ಕಾರ ಮತ್ತು ಖಾಸಗಿ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಕಾರ್ಮಿಕರು ಅನುಭವಿಸುತ್ತಿರುವ ತೊಂದರೆ ಬಗ್ಗೆ ಪ್ರಸ್ತಾಪಿಸುವುದು.

..3

**ಆ) ಶ್ರೀ ಎನ್. ರವಿಕುಮಾರ್** ಅವರು ರಾಜ್ಯ ಸರ್ಕಾರಿ ಶಾಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ವಿದ್ಯಾರ್ಥಿಗಳಿಗೆ ``ವಿದ್ಯಾವಿಕಾಸ ಯೋಜನೆ''ಯಡಿ ಸಮವಸ್ತ್ರ ವಿತರಣೆಯಲ್ಲಿ ಆಗಿರುವ ಅವ್ಯವಹಾರದ ಬಗ್ಗೆ ಪ್ರಸ್ತಾಪಿಸುವುದು.

## ೦೬. ನಿಯಮ ೬೮ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:<br>ಕೋಟ ಶ್ರೀನಿವಾಸ ಪೂಜಾರಿ,<br>ಮಾನ್ಯ ವಿರೋಧ ಪಕ್ಷದ ನಾಯಕರು<br>ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ,<br>ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು<br>ಹಾಗೂ ಮಾನ್ಯ ಸದಸ್ಯರುಗಳಾದ:<br>ಆಯನೂರು ಮಂಜುನಾಥ<br>ರಘುನಾಥ್‌ರಾವ್ ಮಲ್ಕಾಪೂರೆ<br>ಡಾ: ತೇಜಸ್ವಿನಿಗೌಡ ಹಾಗೂ<br>ಎನ್. ರವಿಕುಮಾರ್** | **ರಾಜ್ಯದಲ್ಲಿ ಭೀಕರ ಬರಗಾಲ ಮತ್ತು ಈ ಸಂಬಂಧ ರೈತರು ಆತ್ಮಹತ್ಯೆಗೆ ಒಳಗಾಗುತ್ತಿರುವ ಬಗ್ಗೆ.** |

## ೦7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಕೃಷ್ಣಾ ಕೊಳ್ಳದಲ್ಲಿ ``ಬಿ'' ಸ್ಕೀಂ ಅಡಿಯಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರು ಆಂಧ್ರ ಪ್ರದೇಶದ ಪಾಲಾಗುತ್ತಿರುವ ಬಗ್ಗೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಕುರಿತು ದಿನಾಂಕ: 11.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 24(244) ಮತ್ತು 23(280)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಹಾಗೂ ಮಾನ್ಯ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಆ) ಏಕರೂಪದಲ್ಲಿ ಪೊಲೀಸರ ನೇಮಕಾತಿ ಬಗ್ಗೆ ಹಾಗೂ ಔರಾದ್ಕರ್ ವರದಿ ಜಾರಿಯಾಗುವ ಕುರಿತು ದಿನಾಂಕ: 14.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 61(667) ಮತ್ತು 65(19)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ಸದಸ್ಯರುಗಳಾದ: ಶ್ರೀ ಆರ್. ಧರ್ಮಸೇನ ಮತ್ತು ಶ್ರೀ ಎಂ.ಕೆ. ಪ್ರಾಣೇಶ್** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ (ಪ್ರ)**

---